**ಓಎಸ್ ನಂಃ 41/2024**

**ಪಿಡಬ್ಲೂಃ 1**

**<u>ಸಾಕ್ಷಿ ಗೆ ದಿನಾಂಕ 04-12-2025ರಂದು ಕರೆಯಿಸಿ ಪ್ರಮಾಣ ವಚನ ಭೋದಿಸಲಾಯಿತು</u>**

**<u>ಮುಖ್ಯ ವಿಚಾರಣೆ ವಾದಿ ಪರ ಶ್ರೀಮತಿ ಎಮ್.ವಿ.ಎಲ್. ವಕೀಲರಿಂದ</u>**

ನಾನು ನನ್ನ ಸಾಕ್ಷ್ಯವನ್ನು ಪ್ರಮಾಣ ಪತ್ರದ ಮೂಲಕ ಸಲ್ಲಿಸಿರುತ್ತೇನೆ. ಅದರಲ್ಲಿ ಬರೆದ ವಿಷಯಗಳು ಸತ್ಯ ಮತ್ತು ನಿಜ ಇರುತ್ತದೆ ಆದ್ದರಿಂದ ಸದರಿ ನನ್ನ ಪ್ರಮಾಣ ಪತ್ರವನ್ನು ಮುಖ್ಯ ವಿಚಾರಣೆಯನ್ನಾಗಿ ಪರಿಗಣಿಸಬೇಕಾಗಿ ಪ್ರಾರ್ಥಿಸುತ್ತೇನೆ. ನಾನು ಈ ಕೆಳಗಿನ ದಾಖಲಾತಿಗಳನ್ನು ನ್ಯಾಯಾಲಯಕ್ಕೆ ಹಾಜರುಪಡಿಸುತ್ತಿದ್ದೇನೆ.

ಸರ್ವೆ ನಂಬರ್ 12ರ 6 ಕೈಬರಹದ ಪಹಣಿ ಪತ್ರಿಕೆಗಳನ್ನು ಹಾಜರುಪಡಿಸಿದ್ದು ಅವುಗಳನ್ನು ಕ್ರಮವಾಗಿ ನಿಪಿ-1 ರಿಂದ 6 ಎಂದು, ಸರ್ವೆ ನಂಬರ್ 12ರ 2001-2002ರಿಂದ 2023-2024ರವರೆಗಿನ ಕಂಪ್ಯೂಟರ್ ಪಹಣಿ ಪತ್ರಿಕೆಗಳನ್ನು ಹಾಜರುಪಡಿಸಿದ್ದು ಅವುಗಳನ್ನು ಕ್ರಮವಾಗಿ ನಿಪಿ-7 ರಿಂದ 31 ಎಂದು, ಸರ್ವೆ ನಂಬರ್ 12ರ ಸರ್ವೆ ರಿಪೋರ್ಟ್ ಮತ್ತು ಪಂಚನಾಮೆಯ ದೃಢೀಕೃತ ನಕಲನ್ನು ಹಾಜರುಪಡಿಸಿದ್ದು ಪಂಚನಾಮೆಯನ್ನು ನಿಪಿ- 32 ಎಂದು ಸರ್ವೆ ನಕ್ಷೆಯನ್ನಉ ನಿಪಿ-33 ಎಂದು ಗುರುತಿಸಲಾಯಿತು. ದಿಃ 30.03.1999ರ ಸರ್ವೆ ನಂಬರ್ 12ಕ್ಕೆ ಸಂಬಂಧಪಟ್ಟ ಖರೀದಿ ಪತ್ರದ ದೃಢೀಕೃತ ನಕಲನ್ನು ಹಾಜರುಪಡಿಸಿದ್ದು ಅದನ್ನು ನಿಪಿ-34 ಎಂದು, ದಿಃ 30.03.1999ರ ಸರ್ವೆ ನಂಬರ್ 13ಕ್ಕೆ ಸಂಬಂಧಪಟ್ಟ ಖರೀದಿ ಪತ್ರದ ದೃಢೀಕೃತ ನಕಲನ್ನು ಹಾಜರುಪಡಿಸಿದ್ದು ಅದನ್ನು ನಿಪಿ-35 ಎಂದು ಗುರುತಿಸಲಾಯಿತು.

<u>ಪಾಟೀ ಸವಾಲುಃ ಪ್ರತಿವಾದಿ ಪರ ಶ್ರೀ.ಕೆ.ಜೆ.ಕೆ. ವಕೀಲರಿಂದ</u>

ಪ್ರತಿವಾದಿ ಪರ ವಕೀಲರು ಪಾಟೀ ಸವಾಲಿಗೆ ಸಮಯ ಕೋರಿದ್ದು, ಸಮಯ ನೀಡಲಾಯಿತು.

(ತೆರೆದ ನ್ಯಾಯಾಲಯದಲ್ಲಿ ನನ್ನ ಉಕ್ತಲೇಖನಕ್ಕೆ ಬೆರಳಚ್ಚು ಮಾಡಲಾಯಿತು.)

ಓ. ಹೇ . ಕೇ. ಸರಿ ಇದೆ.

ಸಿವಿಲ್ ನ್ಯಾಯಾಧೀಶರು,

ಚಿತ್ತಾಪೂರ.